


ಅರುಣ ಪಿ. ಭಟ್ಟ

## ವಾರಭವಿಷ್ಯ 20.5.2021ರಿಂದ 26.5.2021ರವರೆಗೆ




ಕಾನೂನು ವ್ಯಾಜ್ಯಗಳಿದ್ದಲ್ಲಿ ಅದನ್ನು ನಿವಾರಿಸಿಕೊಳ್ಳಲು ಸೂಕ್ತ ವೇದಿಕೆ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಕೆಲಸ ಕಾರ್ಯಗಳಲ್ಲಿ ಪ್ರಗತಿ ಇದೆ. ಪ್ರೀತಿಪಾತ್ರರ ಜತೆಗೆ ಬಾಂಧವ್ಯ ಮತ್ತಷ್ಟು ಗಟ್ಟಿಯಾಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರುತ್ತದೆ. ಆರೋಗ್ಯ ಉತ್ತಮವಾಗಿದ್ದು, ಚೈತನ್ಯ ಇರುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಏರಿಳಿತಗಳಿರುತ್ತವೆ. ಶುಭದಿನ 23. ಸೌಂದರ್ಯ ಲಹರಿ ಪಠಿಸಿರಿ.




ವಾರದ ಶುರುವಿನಲ್ಲಿ ವೈವಾಹಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಜತೆಗೆ ಈ ಹಿಂದೆ ಮನಸ್ತಾಪ ಇದ್ದಲ್ಲಿ ನಿವಾರಣೆ ಆಗುತ್ತದೆ. ಪ್ರೀತಿಪಾತ್ರರ ಜತೆ ಬಾಂಧವ್ಯ ಗಟ್ಟಿಯಾಗಲಿದೆ. ವಾರದ ಮೊದಲ ಭಾಗದಲ್ಲಿ ಆರೋಗ್ಯ ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಸಮಸ್ಯೆ ಎದುರಾಗಬಹುದು. ಆದರೆ ಈ ಸಮಯದಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಶುಭದಿನ 20. ಹನುಮಾನ್ ಚಾಲಿಸ್ ಪಠಿಸಿರಿ.




ಶೈಕ್ಷಣಿಕ ಹಾಗೂ ವೃತ್ತಿರಂಗದಲ್ಲಿ ಹಲವು ಮಹತ್ತರವಾದ ಅವಕಾಶಗಳು ದೊರಕುತ್ತವೆ. ಅತ್ಯುತ್ತಮ ಫಲಿತಾಂಶ ದೊರೆಯಲಿದೆ. ವಾರದ ಮೊದಲ ಭಾಗದಲ್ಲಿ ಆದಾಯ ಸಮಾಧಾನಕರ ಮಟ್ಟಕ್ಕೆ ಏರಿಕೆ ಆಗಲಿದೆ. ಪ್ರೀತಿಪಾತ್ರರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಈ ಹಿಂದಿನ ಕೌಟುಂಬಿಕ ಸಮಸ್ಯೆಗಳನ್ನು ತಾಳ್ಮೆಯಿಂದ ಬಗೆಹರಿಸಿಕೊಳ್ಳಲಿದ್ದೀರಿ. ಶುಭದಿನ 23. ಚಂಡಿ ಪಾರಾಯಣ ಮಾಡಿರಿ.




ವ್ಯಾಪಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರು ಅತ್ಯುತ್ತಮ ಫಲಿತಾಂಶ ಪಡೆಯಲಿದ್ದಾರೆ. ಕಚೇರಿಯಲ್ಲಿ ಬದಲಾವಣೆ ತರುವುದಕ್ಕೆ ಹಣ ಖರ್ಚು ಮಾಡಲಿದ್ದೀರಿ. ಆರೋಗ್ಯ ಮತ್ತು ದೈಹಿಕ ದೃಢತೆ ಚೆನ್ನಾಗಿರಲಿದೆ. ವೃತ್ತಿಪರ ಕೌಶಲವನ್ನು ಹೆಚ್ಚಿಸಿಕೊಳ್ಳಲು ಅವಕಾಶ ದೊರೆಯಲಿದೆ. ನಿಮ್ಮ ಸಂಗಾತಿ ನಿಮ್ಮ ಬಗ್ಗೆ ಅಸಮಾಧಾನ ಹೊಂದಿದ್ದಲ್ಲಿ ಮನವೊಲಿಸಲು ಸಫಲರಾಗುತ್ತೀರಿ. ಶುಭದಿನ 22. ಶ್ರೀರಾಮ ರಕ್ಷಾ ಸ್ತೋತ್ರ ಪಠಿಸಿರಿ.




ಆರೋಗ್ಯವನ್ನು ಉತ್ತಮವಾಗಿ ಇರಿಸಿಕೊಳ್ಳುವ ನಿಟ್ಟಿನಲ್ಲಿ ಪ್ರಯತ್ನ ಆರಂಭಿಸಲಿದ್ದೀರಿ. ಹಲವು ಸಕಾರಾತ್ಮಕ ಬದಲಾವಣೆಗೆ ಸಾಕ್ಷಿಯಾಗಲಿದ್ದೀರಿ. ಬರವಣಿಗೆ, ಕಲೆ, ಸಾಹಿತ್ಯ, ಸೌಂದರ್ಯ, ಉತ್ಪಾದನೆ, ನಿರ್ಮಾಣ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುವವರಿಗೆ ಏಳ್ಗೆ ಇದೆ. ದಾನ– ಧರ್ಮ ಕಾರ್ಯಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಮಕ್ಕಳ ಪ್ರಗತಿಯಿಂದ ಸಂತಸ ಉಂಟಾಗಲಿದೆ. ಶುಭದಿನ 21. ಗಣಪತಿಸುಬ್ರಮಣ್ಯ ಜಪ ಮಾಡಿರಿ.




ವಾರದ ಶುರುವಿನಿಂದಲೇ ಹತ್ತಿರದ ಸಂಬಂಧಿಗಳೊಂದಿಗೆ ಬಾಂಧವ್ಯ ಗಟ್ಟಿಯಾಗಲಿದೆ. ಕುಟುಂಬದಲ್ಲಿ ಸಂತಸದ ವಾತಾವರಣ ಇರಲಿದೆ. ಆದರೆ ಆರೋಗ್ಯಕ್ಕೆ ಸಂಬಂಧಿಸಿದಂತೆ ಕೆಲ ಸಮಸ್ಯೆ ಕಾಣಿಸಿಕೊಳ್ಳಬಹುದು. ವ್ಯವಹಾರಗಳಲ್ಲಿ ದೊಡ್ಡ ಮಟ್ಟದ ಲಾಭ ದೊರೆಯುವ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಅದೃಷ್ಟದ ಬೆಂಬಲ ಇರುತ್ತದೆ. ಶುಭದಿನ 21. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಉತ್ಪಾದನೆ, ಸಂಶೋಧನೆ ಹಾಗೂ ಅಭಿವೃದ್ಧಿ ಇತ್ಯಾದಿ ಕ್ಷೇತ್ರದಲ್ಲಿ ಅಂದುಕೊಂಡ ಗುರಿಯೆಡೆಗೆ ಸಾಗಬಹುದು. ವ್ಯಾಪಾರ– ಉದ್ಯಮ ವಿಸ್ತರಣೆಗೆ ಕೈಗೊಂಡ ಪ್ರಯತ್ನಗಳಲ್ಲಿ ಯಶಸ್ವಿ ಆಗಲಿದ್ದೀರಿ. ಆರೋಗ್ಯ ಉತ್ತಮವಾಗಿರುತ್ತದೆ. ವಾರದ ಕೊನೆಗೆ ಅದೃಷ್ಟ ನಿಮ್ಮ ಪಾಲಿಗೆ ಇರಲಿದ್ದು, ಹಲವು ಬಗೆಯಲ್ಲಿ ಅನುಕೂಲಕರ ಸನ್ನಿವೇಶ ಸೃಷ್ಟಿಯಾಗಲಿದೆ. ಶುಭದಿನ 22. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಿದೇಶಗಳಲ್ಲಿ ಕಾರ್ಯ ನಿರ್ವಹಿಸಲು ಬಯಸಿದವರಿಗೆ ಶುಭ ವಾರ್ತೆಗಳು ಬರಲು ಆರಂಭವಾಗುತ್ತವೆ. ಆರ್ಥಿಕ ಹೂಡಿಕೆಗಳಿಗೆ ಉತ್ತಮ ಫಲಿತಾಂಶ ದೊರೆಯಲಿದೆ. ಪ್ರಯತ್ನ ಮಾಡಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ. ನಿಮ್ಮ ಪ್ರತಿಸ್ಪರ್ಧಿಗಳ ವಿರುದ್ಧ ಕೈ ಮೇಲಾಗಲಿದೆ. ಆರೋಗ್ಯ ಮತ್ತು ಪ್ರೀತಿ ಪ್ರೇಮದ ವಿಚಾರದಲ್ಲಿ ಏರಿಳಿತಗಳನ್ನು ಕಾಣಲಿದ್ದೀರಿ. ಶುಭದಿನ 26. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ಜೀವನ ಚೆನ್ನಾಗಿ ಇರಬೇಕು ಎಂಬ ಕಾರಣಕ್ಕೆ ನೀವು ಹೆಚ್ಚು ಶ್ರಮ ಹಾಕಿ ಕೆಲಸ ಮಾಡಲಿದ್ದೀರಿ. ಆರ್ಥಿಕ ಸ್ಥಿತಿ ಉತ್ತಮವಾಗಿ ಇರಲಿದೆ. ಸಂಗಾತಿ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ವ್ಯಾಪಾರದಲ್ಲಿ ಏಳ್ಗೆ ಕಾಣಿಸುವ ಸೂಚನೆ ದೊರೆಯುತ್ತದೆ. ಈ ಅವಧಿಯಲ್ಲಿ ಆರೋಗ್ಯ ಸ್ಥಿತಿ ಅಷ್ಟೇನೂ ಉತ್ತಮವಾಗಿ ಇರಲಿಕ್ಕಿಲ್ಲ. ಶುಭದಿನ 21. ರಾಘವೇಂದ್ರ ಸ್ವಾಮಿಗಳ ಭಜನೆ ಮಾಡಿರಿ.




ಕೀರ್ತಿ ಗಳಿಸುವುದಕ್ಕೆ ಉತ್ತಮ ಅವಕಾಶಗಳಿವೆ. ಆರೋಗ್ಯ ಸ್ಥಿರವಾಗಿರುತ್ತದೆ. ಈ ಹಿಂದೆ ಇದ್ದ ಆರೋಗ್ಯ ಸಮಸ್ಯೆಗಳು ನಿವಾರಣೆ ಆಗುತ್ತವೆ. ವೃತ್ತಿ ಬದುಕಿನ ನಿಮ್ಮ ಅನುಭವವನ್ನು ಸಹೋದ್ಯೋಗಿಗಳು ಮನಸಾರೆ ಹೊಗಳಲಿದ್ದಾರೆ. ವಾರದ ದ್ವಿತೀಯಾರ್ಧದಲ್ಲಿ ಆರ್ಥಿಕ ಸ್ಥಿತಿ ಉತ್ತಮವಾಗಿರುತ್ತದೆ. ಜೀವನಶೈಲಿಯಲ್ಲಿ ಸಕಾರಾತ್ಮಕವಾದ ಬದಲಾವಣೆ ಕಾಣಲಿದ್ದೀರಿ. ಶುಭದಿನ 23. ಕಾಲಭೈರವನ ಸೇವೆ ಮಾಡಿರಿ.




ಈ ವಾರ ಒಂದಿಲ್ಲೊಂದು ಕ್ರಿಯೇಟಿವ್ ಕೆಲಸದಲ್ಲಿ ತೊಡಗಿಕೊಳ್ಳಲಿದ್ದೀರಿ. ಬಹಳ ಖ್ಯಾತರಾದ ವ್ಯಕ್ತಿಯನ್ನು ಭೇಟಿ ಆಗುವ ಸಾಧ್ಯತೆ ಇದೆ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಜ್ಞಾನವನ್ನು ಹೆಚ್ಚು ಮಾಡಿಕೊಳ್ಳುವುದಕ್ಕೆ ಅಗತ್ಯವಾದ ಪ್ರಯತ್ನಗಳನ್ನು ಮಾಡಲಿದ್ದೀರಿ. ವಾರದ ದ್ವಿತೀಯಾರ್ಧದಲ್ಲಿ ವೃತ್ತಿ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ಮಾಡಿಕೊಳ್ಳಲಿದ್ದೀರಿ. ಶುಭದಿನ 23. ವಿಷ್ಣು ಸಹಸ್ರನಾಮ ಓದಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಫಲಿತಾಂಶ ನಿಮಗೆ ದೊರೆಯಲಿದೆ. ದೂರದ ಸ್ಥಳದಿಂದ ಶುಭ ವಾರ್ತೆ ಕೇಳಲಿದ್ದೀರಿ. ಹಣಕಾಸು ಹೂಡಿಕೆಯಿಂದ ಉತ್ತಮ ಲಾಭವಾಗಲಿದೆ. ಕೆಲವು ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ಋತುಮಾನಕ್ಕೆ ತಕ್ಕ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ವಾರದ ದ್ವಿತೀಯಾರ್ಧದಲ್ಲಿ ಅದೃಷ್ಟದ ಬಲ ನಿಮಗಿರುತ್ತದೆ. ಶುಭದಿನ 20. ಶಿವಕವಚ ಪಠಿಸಿರಿ.